ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

18

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 7/12/20

# ಸಭಾಪತಿ ವಿರುದ್ಧ ಅವಿಶ್ವಾಸಕ್ಕೆ ಗರಂ



ಬೆಂಗಳೂರು: ಯಾವ ಕಾರಣಕ್ಕೆ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ನೋಟಿಸ್ ಕೊಟ್ಟಿರುವ ಬಿಜೆಪಿ ನಡೆಗೆ ಮೇಲ್ಮನೆ ಪ್ರತಿಪಕ್ಷ ನಾಯಕ ಎಸ್.ಆರ್. ಪಾಟೀಲ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಅವರು ಏಕೆ ಅವಿಶ್ವಾಸ ನಿರ್ಣಯ ಕೊಟ್ಟಿದ್ದಾರೆಯೋ ಗೊತ್ತಿಲ್ಲ ಸಭಾಪತಿ ಪ್ರತಾಪ್ ಚಂದ್ರ ಶೆಟ್ಟಿ ಸಂಪ್ರದಾಯ, ಘನತೆ ಗೌರವ ಹೆಚ್ಚಿಸುವ ಕೆಲಸ ಮಾಡಿದ್ದಾರೆ. ಕುರ್ಚಿಯಿಂದ ಗೌರವ ಬರೋದಿಲ್ಲ. ವ್ಯಕ್ತಿಯಿಂದ ಕುರ್ಚಿಗೆ ಗೌರವ ಬರಬೇಕು. ಪರಿಷತ್‌ನಲ್ಲಿ ಚರ್ಚೆಗೆ ಬಂದ ಸಂದರ್ಭದಲ್ಲಿ ನಿರ್ಣಯ ಮಾಡುತ್ತೇವೆ. ಯಾವುದೋ ರಾಜಕೀಯ ಕಾರಣಕ್ಕಾಗಿ ಅವಿಶ್ವಾಸದ ನೋಟಿಸ್ ನೀಡಲಾಗಿದೆ ಎಂಬುದು ನಮ್ಮ ಭಾವನೆ.

ಗೌರವಯುತ ಸ್ಥಾನದಲ್ಲಿ ಕುಳಿತಿರುವ ಸಭಾಪತಿಯವರನ್ನು ಸ್ಥಾನದಿಂದ ಕೆಳಗಿಳಿಸುವಂತಹ ಕ್ರಮ ಏಕೆ. ಬಿಜೆಪಿಗೆ ಬಹುಮತವಿಲ್ಲ. ಜೆಡಿಎಸ್ ಬೆಂಬಲ ಪಡೆದುಕೊಂಡು ಇಂತಹ ಕ್ರಮಕ್ಕೆ ಮುಂದಾಗುತ್ತಿರುವುದು ಸಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕಾಂಗ್ರೆಸ್ ಪಕ್ಷದ ಜೊತೆ ಮೈತ್ರಿ ಮಾಡಿಕೊಂಡಿದ್ದರಿಂದಲೇ ಎಚ್.ಡಿ. ಕುಮಾರಸ್ವಾಮಿಯವರಿಗೆ ಮುಖ್ಯಮಂತ್ರಿಯಾಗುವ ಯೋಗ ಸಿಕ್ಕಿತ್ತು. ಇಲ್ಲವಾದಲ್ಲಿ ಅವರಿಗೆ ಮುಖ್ಯಮಂತ್ರಿಯಾಗುವ ಅವಕಾಶವೇ ಸಿಗುತ್ತಿರಲಿಲ್ಲ. ಈ ಬಗ್ಗೆ ಅವರು ಅರ್ಥ ಮಾಡಿಕೊಳ್ಳಬೇಕು ಎಂದರು.

ಸಭಾಪತಿ ವಿರುದ್ಧ ಬಿಜೆಪಿ ಮಂಡನೆ ಮಾಡಿರುವ ಅವಿಶ್ವಾಸ ನಿರ್ಣಯ ಅಂಗೀಕಾರವಾಗದಂತೆ ಮಾಡಲು ಜೆಡಿಎಸ್ ಜೊತೆ ಮಾತುಕತೆ ನಡೆಸುತ್ತೀರಾ ಎಂಬ ಸುದ್ದಿಗಾರರ ಪ್ರಶ್ನೆಗೆ ಈ ವಿಷಯ ಪಕ್ಷದ ಮಟ್ಟದಲ್ಲಿ ಚರ್ಚೆಯಾಗಲಿದೆ. ಅಲ್ಲಿ ನಿರ್ಧಾರ ತೆಗೆದುಕೊಳ್ಳುತ್ತಾರೋ ಹಾಗೆಯೇ ನಡೆದುಕೊಳ್ಳಬೇಕಾಗುತ್ತದೆ ಎಂದರು.